ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2067(2417)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ: ಚಂದ್ರಶೇಖರ್ ಬಿ. ಪಾಟೀಲ್(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಬೀದರ್ ಜಿಲ್ಲೆಯ ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಬಗ್ಗೆ

(ಅ) 2020-21ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಪ್ರಾರಂಭವಾಗದಿರಲು ಕಾರಣಗಳೇನು;

(ಆ) ಕಾರ್ಖಾನೆ ಪ್ರಾರಂಭಕ್ಕಾಗಿ ಹಲವಾರು ಬಾರಿ ಸರ್ಕಾರದ ಗಮನಕ್ಕೆ ತಂದರೂ ಯಾವುದೇ ರೀತಿಯ ಪ್ರತಿಕ್ರಿಯೆ ನೀಡದಿರಲು ಕಾರಣವೇನು;

(ಇ) ಸದರಿ ಕಾರ್ಖಾನೆಯನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು?